ತಮಗೆ ಆಶ್ವಾಸನೆ ಕೊಡುತ್ತಾ ಇದ್ದೇನೆ. ನನ್ನ ಮೇಲೆ ವಿಶ್ವಾಸವಿಡಿರಿ. ನಾವು ಅದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತೇವೆ. ಮತ್ತು ನೀವು ಹೇಳುವ ಮಟ್ಟದಲ್ಲಿ ಆಗಿಲ್ಲ ಶ್ರೀರಾಮರೆಡ್ಡಿಯವರೇ. ಅಷ್ಟು ಹೇಳಿದ್ದೀರಲ್ಲಾ ಭಯಂಕರವಾಗಿ ಆಗಿದೆ ಅಂತ, ಅಷ್ಟು ಆಗಿಲ್ಲ. ಆದರೆ ಇವತ್ತು ಸರ್ಕಾರ ಅದನ್ನು ಗಮನಕ್ಕೆ ತೆಗೆದುಕೊಳ್ಳುತ್ತದೆ. ಒಳ್ಳೆಯ ದೀರ್ಘವಾದ ಚರ್ಚೆಯಾಗಿದೆ. ಸರ್ಕಾರ ಅದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತದೆ ಎಂದು ಹೇಳಿ ನನ್ನ ಮಾತು ಮುಗಿಸುತ್ತೇನೆ.

ಅಧ್ಯಕ್ಷರು : ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತಿದ್ದೇನೆ.

(ಸದನವು 9 ಗಂಟೆ 45 ನಿಮಿಷಕ್ಕೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು)

10) ಅನುಬಂಧ–1

530(632) : ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸುಬ್ರಹ್ಮಣ್ಯ ಗುಂಡ್ಯ ರಸ್ತೆ ಹಾಗೂ ಮೈಸೂರು ಬಂಟ್ವಾಳ ರಾಜ್ಯ ಹೆದ್ದಾರಿಯಲ್ಲಿ ರಸ್ತೆಗಳು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸುಬ್ರಹ್ಮಣ್ಯ ಗುಂಡ್ಯ ರಸ್ತೆ ದುರಸ್ತಿ ಮಾಡಿಸಲು ಹಾಗೂ ಮೈಸೂರು ಬಂಟ್ವಾಳ ರಸ್ತೆಯಲ್ಲಿ ಸುಳ್ಯ ನಗರದ ಬಳಿ ಬೈಪಾಸ್ ರಸ್ತೆ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹಾಗಿದ್ದಲ್ಲಿ ಎಷ್ಟು ಸಮಯದಲ್ಲಿ ಸರ್ಕಾರ ಈ ಬಗ್ಗೆ ಕ್ರಮಕೈಗೊಳ್ಳಲಿದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಕಳೆದ ಎರಡು ತಿಂಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕವಾಗಿ ಭಾರೀ ಮಳೆ ಬಿದ್ದಿರುವ ಹಿನ್ನೆಲೆಯಲ್ಲಿ ಹಾಗೂ ಸುರಿಯುತ್ತಿರುವ ಮಳೆಯಿಂದಾಗಿ ಸದರಿ ಎರಡು ರಸ್ತೆಗಳ ಕೆಲವು ಭಾಗಗಳಲ್ಲಿ ಮತ್ತು ಅಲ್ಲಲ್ಲಿ ರಸ್ತೆ ಹಾಳಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಸುಬ್ರಹ್ಮಣ್ಯ ಗುಂಡ್ಯ (ಗುಂಡ್ಯ ಕುಲ್ಕುಂದ ಜಿಲ್ಲಾ ಮುಖ್ಯ ರಸ್ತೆ) ರಸ್ತ ಕಿಮೀ 0.00 ರಿಂದ 4.00 ಕಿಮೀ ನಲ್ಲಿ ಡಾಂಬರೀಕರಣ ಅಭಿವೃದ್ಧಿಗೆ ಈಗಾಗಲೇ ಸರ್ಕಾರದಿಂದ ಸಿಆರ್ಎಫ್ ಅಡಿಯಲ್ಲಿ ರೂ. 50.00 ಲಕ್ಷಗಳಿಗೆ ಅನುಮೋದನೆ ನೀಡಿದ್ದು ಕಾಮಗಾರಿಯನ್ನು ನಿಯಮಾನುಸಾರ ಟೆಂಡರ್ ಕರೆದು, ಕೈಗೆತ್ತಿಕೊಳ್ಳಲಾಗುತ್ತಿದೆ. ಹಾಗೂ ಉಳಿದಂತ ಭಾಗಗಳಲ್ಲಿ ರಸ್ತೆಯಲ್ಲಿ ಬಿದ್ದಿರುವಂತ ಗುಂಡಿಗಳನ್ನು ಮುಚ್ಚಲು, ಗುಂಡಿ ಮುಚ್ಚುವ ಕಾರ್ಯಕ್ರಮದಡಿಯಲ್ಲಿ ಈಗಾಗಲೇ ಟೆಂಡರ್ ಕರೆದಿದ್ದು ಸದ್ಯದಲ್ಲಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. ಮೈಸೂರು ಬಂಟ್ವಾಳ ರಸ್ತೆಯಲ್ಲಿ ಸುಳ್ಯ ನಗರದ ಬಳಿ ಬೈಪಾಸ್ ರಸ್ತೆ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಇ) ಅನುದಾನದ ಲಭ್ಯತೆಯನ್ನಾಧರಿಸಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

531(634) : ಶ್ರೀ ಅಂಗಾರ ಎಸ್ (ಸೂಳ್ಯ) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರ್ವ ಸುಬ್ರಹ್ಮಣ್ಯ ರಸ್ತೆಯು ಪವಿತ್ರ ಪುಣ್ಯ ಕ್ಷೇತ್ರವಾದ ಕುಕ್ಕೆ ಸುಬ್ರಹ್ಮಣ್ಯ ದೇವಾಲಯಕ್ಕೆ ಹೋಗುವ ರಸ್ತೆಯಾಗಿದ್ದು, ಈ ರಸ್ತೆಯಲ್ಲಿ ಹೊಂಡ ಗುಂಡಿಗಳು